# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಪಶ್ಚಿಮ ವಲಯ, ಶ್ರೀರಾಮಮಂದಿರ ಉಪವಿಭಾಗ

---

### ವಾರ್ಡ್ ನಂ.98 : ಪ್ರಕಾಶ್ ನಗರ

---

**ದಿನಾಂಕ: 24.09.2021 ರಂದು ಬೆಳಿಗ್ಗೆ 10.30 ಗಂಟೆಗೆ ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿ, ವಾರ್ಡ್ 98 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು, ವಾರ್ಡ್ 98ರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಎಂ.ಬಿ.ನಾಗರಾಜು | ನೋಡಲ್ ಅಧಿಕಾರಿ-ವಾರ್ಡ್ 98 |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 98 |
| 3 | ಪಿ ರವಣಯ್ಯ | ಆರೋಗ್ಯ ಪರಿವೀಕ್ಷಕರು- ವಾರ್ಡ್ 98 |
| 4 | ಬಿ.ಎಸ್.ಪ್ರವೀಣ್ ಕುಮಾರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 5 | ಎನ್.ಎಂ.ತೋಪೇಗೌಡ | ಕಂದಾಯ ಪರಿವೀಕ್ಷಕರು-ವಾರ್ಡ್ 98 |
| 6 | ಪ್ರಕಾಶ ವೈ ವಿ | ಕಿರಿಯ ಅಭಿಯಂತರರು- (ಎಲೆಕ್ಟ್ರಿಕಲ್) |
| 7 | ಎನ್.ವೆಂಕಟೇಶ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 8 | ಶ್ರೀನಿವಾಸುಲು | ಬಿ.ಡಬ್ಲ್ಯೂ.ಎಸ್.ಎಸ್.ಬಿ |

**:ನಡಾವಳಿಯ ವರದಿ:**

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ.ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್‌ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಮತ್ತು ವಾರ್ಡ್ ಕಮಿಟಿ ಸದಸ್ಯರಿಗೆ ಸ್ವಾಗತ ಕೋರಿದರು.

- ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ ಬಿ.ಎಸ್.ಪ್ರವೀಣ್ ಕುಮಾರ್ ಮಾತಾನಾಡುತ್ತಾ, ವಾರ್ಡಿನಲ್ಲಿ ನಾಗರೀಕರು ಮನೆ ಸ್ವಚ್ಛಗೊಳಿಸಿದ ನೀರನ್ನು ರಸ್ತೆಗೆ ಬಿಡುತ್ತಿದ್ದು, ಇದರಿಂದಾಗಿ ಸಾರ್ವಜನಿಕರ ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗಿರುತ್ತದೆ. ಆದ್ದರಿಂದ ಅಂತಹವರಿಗೆ ಚರಂಡಿಗೆ ಬಿಡಲು ತಿಳುವಳಿಕೆ ನೀಡುವಂತೆ ಕೋರಿದರು ಹಾಗೂ ಪ್ರಕಾಶ್ ನಗರದ 2ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ, 4ನೇ ಅಡ್ಡರಸ್ತೆ, ಶ್ರೀರಾಮ ಮಂದಿರ ದೇವಸ್ಥಾನದ ಹತ್ತಿರ ಇಲ್ಲಿ ಬೀದಿದೀಪಗಳು ಉರಿಯುತ್ತಿಲ್ಲವೆಂದು ಇವುಗಳನ್ನು ದುರಸ್ತಿ ಪಡಿಸಲು ಕೋರಿದರು.

- ಮಾನ್ಯ ನೋಡಲ್ ಅಧಿಕಾರಿ ರವರು ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು, ಬೀದಿದೀಪಗಳ ವಿಭಾಗರವರಿಗೆ ಸದರಿ ಸಮಸ್ಯೆಯನ್ನು ಈ ದಿನವೇ ದುರಸ್ತಿ ಪಡಿಸುವಂತೆ ಸೂಚಿಸಿದರು.

➢ ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ ಎನ್.ವೆಂಕಟೇಶ್ ರವರು ಮಾತಾನಾಡುತ್ತಾ, ವಾರ್ಡಿನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ವಿ ಇಲಾಖೆ ವತಿಯಿಂದ ಹಲವು ಕಡೆಗಳಲ್ಲಿ ರಸ್ತೆಗಳನ್ನು ಅಗೆದಿದ್ದು, ಇದರಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮಕೈಗೊಳ್ಳುವಂತೆ ಕೋರಿದರು.

- ಮಾನ್ಯ ನೋಡಲ್ ಅಧಿಕಾರಿ ರವರು ಪ್ರತಿಕ್ರಿಯಿಸಿ ಈಗಾಗಲೇ ಈ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳನ್ನು ಸಂಪರ್ಕಿಸಲಾಗೀ, ಸದರಿಯವರು ಪ್ರಸ್ತುತ ಬಿಡುವು ಕೊಡದೆ ಸುರಿಯುತ್ತಿರುವ ಮಳೆಯ ಕಾರಣ Restoration ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಮಳೆ ಬಿಡುವ ಕೊಟ್ಟ ನಂತರ ಶೀಘ್ರದಲ್ಲಿ ಅಗೆದಿರುವ ರಸ್ತೆಗಳನ್ನು ದುರಸ್ಥಿಪಡಿಸಲಾಗುವುದು ಎಂದು ತಿಳಿಸಿದರು.

➢ ಮಾನ್ಯ ನೋಡಲ್ ಅಧಿಕಾರಿರವರು ಸಭೆಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಪ್ರಸ್ತಾಪಿಸಿದರು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 98ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಮಳೆಯು ಬಿಡುವು ಕೊಟ್ಟ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ**<br>**ಹಾಗೂ ಸಹಾಯಕ ಅಭಿಯಂತರರು**<br>**ವಾರ್ಡ್ 98, ಪ್ರಕಾಶ್ ನಗರ**<br>**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ವಾರ್ಡ್ ಸಮಿತಿ ಅಧ್ಯಕ್ಷರು**<br>**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**<br>**ವಾರ್ಡ್ ನಂ.98, ಪ್ರಕಾಶ್ ನಗರ**<br>**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

ಪ್ರತಿಯನ್ನು:

1) ಮಾನ್ಯ ವಲಯ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಜಂಟಿ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶ್ರೀರಾಮಮಂದಿರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.98 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ

7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಾಜಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
9) ಕಛೇರಿ ಕಡತಕ್ಕೆ